ದಿನಾಂಕ 02.06.2026 ರಂದು ಸಾಕ್ಷಿಯನ್ನು ಕರೆಸಿ ವಿಧಿಬದ್ಧವಾದ ಪ್ರಮಾಣವಚನವನ್ನು ಭೋಧಿಸಲಾಯಿತು.

ಮುಖ್ಯ ವಿಚಾರಣೆ : ವಾದಿ ಪರ ಶ್ರೀ. ಎಸ್ ಎಸ್ ವಕೀಲರಿಂದಃ

ಈ ದಾವೆಯಲ್ಲಿ ನಾನು 2ನೇ ವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ. ಅದರಲ್ಲಿ ಹೇಳಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ಅದರಲ್ಲಿರುವ ಅಂಶಗಳು ಮತ್ತು ಅದರಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ದಿ 31.03.2022ರ ನೋಂದಾಯಿತ ಕ್ರಯ ಕರಾರು ಪತ್ರ ನಿಪಿ-1 ಎಂದು, ಸಾಕ್ಷಿ ಸಹಿಯನ್ನು ನಿಪಿ-1ಎ ಎಂದು ಗುರುತಿಸಲಾಯಿತು. ಪ್ರತಿವಾದಿಗಳ ಹೆಬ್ಬೆಟ್ಟಿನ ಗುರುತುಗಳನ್ನು ನಿಪಿ-1ಬಿ ಮತ್ತು ಸಿ ಎಂದು ಗುರುತಿಸಲಾಯಿತು. ಇ ಖಾತೆ ನಿಪಿ-2 ಎಂದು, ನೋಟೀಸ್ ನಿಪಿ-3 ಎಂದು, ಜಾರಿಯಾಗದ ವಾಪಸ್ಸು ಆದ ಆರ್ ಪಿ ಎ ಡಿ 2 ಲಕೋಟೆ ನಿಪಿ-4 ಮತ್ತು 5 ಎಂದು, ಅಂಚೆ ಸ್ವೀಕೃತಿ ನಿಪಿ-6 ಮತ್ತು 7 ಎಂದು, ಅಂಚೆ ರಶೀದಿ ನಿಪಿ-8 ರಿಂದ 11 ಗುರುತಿಸಲಾಯಿತು.

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುವುದರಿಂದ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖದ ಮೇರೆಗೆ ಬೆರಳಚ್ಚು ಮಾಡಲಾಯಿತು.)

(ಸಾ.ಓ.ಹೇ.ಕೇ.ಸ.ಇ.ಎ.ಒ) ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಚನ್ನಪಟ್ಟಣ.

ಯಾವುದೇ ದಾಖಲಾತಿಗಳನ್ನು ಗುರುತಿಸಿಕೊಂಡಿರುವುದಿಲ್ಲ.

( ಎದುರುದಾರರು ಮಧ್ಯಂತರ ಅರ್ಜಿ ಒಂದಕ್ಕೆ ತಕರಾರು ಅರ್ಜಿ ಸಲ್ಲಿಸದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುವುದರಿಂದ ಮೂಂದೂಡಲಾಯಿತು.)

( ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿರುವುದರಿಂದ ಮೂಂದೂಡಲಾಯಿತು.)

( ಈ ಹಂತದಲ್ಲಿ ಪ್ರತಿವಾದಿಯ ವಿರುದ್ಧ ಏಕತರ್ಫಿಯ ಆದೇಶ ಮಾಡಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)

( ಈ ಹಂತದಲ್ಲಿ ಪ್ರತಿವಾದಿ ಪ್ರತಿವಾದ ಪತ್ರವನ್ನು ಸಲ್ಲಿಸದ ಕಾರಣ ಹಾಗೂ ನ್ಯಾಯಾಲಯದ ಮುಂದೆ ಹಾಜರಾಗದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.)